# ಕರ್ನಾಟಕ ವಿಧಾನ ಪರಿಷತ್ತು

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು** : **ಡಾ. ಧನಂಜಯ ಸರ್ಜಿ**
**(ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು)**

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : **2301**

**ಉತ್ತರಿಸಬೇಕಾದ ದಿನಾಂಕ** : **26-03-2026**

**ಉತ್ತರಿಸಬೇಕಾದ ಸಚಿವರು** : **ಸನ್ಮಾನ್ಯ ಮುಖ್ಯಮಂತ್ರಿ**

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯ ಅಪೆಕ್ಸ್ ಬ್ಯಾಂಕ್‌ಗಳಲ್ಲಿನ ವಿವಿಧ ನೇಮಕಾತಿಗಳಿಗೆ ಸಂಬಂಧಿಸಿದಂತೆ ಅನೇಕ ವರ್ಷಗಳಿಂದ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಹೌದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. |
| ಆ) | ವಿವಿಧ ನೇಮಕಾತಿಗಳ ಪ್ರಸ್ತುತ ಪ್ರಗತಿಯೇನು; (ಕಳೆದ 3 ವರ್ಷಗಳ ವಿವರ ನೀಡುವುದು) | ಅಪೆಕ್ಸ್ ಬ್ಯಾಂಕಿನಲ್ಲಿ 'ಬ್ಯಾಂಕ್ ಸಹಾಯಕರ' ವೃಂದದಲ್ಲಿ ಖಾಲಿ ಇದ್ದ ಒಟ್ಟು 93 ಹುದ್ದೆಗಳಿಗೆ ದಿನಾಂಕ:05-03-2024 ರಂದು ನೇಮಕಾತಿ ಮಾಡಲು ಜಾಹೀರಾತು ನೀಡಿದ್ದು, ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳಿಗೆ ದಿನಾಂಕ:01-09-2024 ರಂದು ಲಿಖಿತ ಪರೀಕ್ಷೆಯನ್ನು ನಡೆಸಲಾಗಿರುತ್ತದೆ. ಲಿಖಿತ ಪರೀಕ್ಷೆಯ ಫಲಿತಾಂಶವನ್ನು ಬ್ಯಾಂಕಿನ ವೆಬ್‌ಸೈಟ್‌ನಲ್ಲಿ ದಿನಾಂಕ:20-12-2024 ರಂದು ಪ್ರಕಟಿಸಲಾಗಿದ್ದು, ಅರ್ಹ ಅಭ್ಯರ್ಥಿಗಳಿಗೆ ಮೌಖಿಕ ಸಂದರ್ಶನ ನಡೆಸಲು ಬಾಕಿ ಇರುತ್ತದೆ. |
| ಇ) | ಅಪೆಕ್ಸ್ ಬ್ಯಾಂಕ್‌ನ ಸಹಾಯಕ ಹುದ್ದೆಗಳಿಗೆ 2024ರಲ್ಲಿ ಅಧಿಸೂಚನೆ ಹೊರಡಿಸಿ, ಪರೀಕ್ಷೆ ನಡೆದು 26-10-2024ರಲ್ಲಿಯೇ ಕೀ ಆನ್ಸರ್ (Key answer) ಬಿಡುಗಡೆ ಮಾಡಲಾಗಿದ್ದರೂ ಇಲ್ಲಿಯವರೆಗೆ ನೇಮಕಾತಿ ಪೂರ್ಣಗೊಳಿಸದಿರಲು ಕಾರಣಗಳೇನು; | ಬ್ಯಾಂಕಿನ ಆಡಳಿತ ಮಂಡಳಿ ಪದಾವಧಿಯು ದಿನಾಂಕ:21-12-2025 ಕ್ಕೆ ಮುಕ್ತಾಯವಾಗಿರುತ್ತದೆ. ಕರ್ನಾಟಕ ಸಹಕಾರ ಸಂಘಗಳ ನಿಯಮಗಳು 1960 ನಿಯಮ 18 (ಜಿ) ರನ್ವಯ, ಯಾವುದೇ ಸಹಕಾರಿ ಸಂಘದ ಆಡಳಿತ ಮಂಡಳಿಯ ಕಛೇರಿಯ ಅವಧಿ ಮುಗಿಯುವ ಕೊನೆಯ ಮೂರು ತಿಂಗಳ ಮುಂಚೆ ಯಾವುದೇ ನೇಮಕಾತಿ ಪ್ರಕ್ರಿಯೆಗಳನ್ನು ಮಾಡಬಾರದು ಎಂದಿರುತ್ತದೆ.<br><br>ಪ್ರಸ್ತುತ ಆಡಳಿತ ಮಂಡಳಿ ಚುನಾವಣೆ ಮುಗಿದಿದ್ದು, ಹೊಸ ಆಡಳಿತ ಮಂಡಳಿ ರಚನೆಯಾದ ನಂತರ ಪ್ರಕ್ರಿಯೆ ಪೂರ್ಣಗೊಳಿಸಲಾಗುವುದು. |

| | | |
|---|---|---|
| ಈ) | ಸದರಿ ನೇಮಕಾತಿಯನ್ನು ಪೂರ್ಣಗೊಳಿಸಿ, ಅರ್ಹರಿಗೆ ಯಾವಾಗ ಉದ್ಯೋಗದ ಆದೇಶಗಳನ್ನು ನೀಡಲಾಗುವುದು? (ವಿವರ ಒದಗಿಸುವುದು) | ಪ್ರಸ್ತುತ ಆಡಳಿತ ಮಂಡಳಿ ಚುನಾವಣೆ ಮುಗಿದಿದ್ದು, ಹೊಸ ಆಡಳಿತ ಮಂಡಳಿ ರಚನೆಯಾದ ನಂತರ ಪ್ರಕ್ರಿಯೆ ಪೂರ್ಣಗೊಳಿಸಲಾಗುವುದು. |

**ಕಡತ ಸಂಖ್ಯೆ: ಸಿಒ 125 ಸಿಎಲ್ಎಸ್ 2026**

(ಸಿದ್ದರಾಮಯ್ಯ)

ಮುಖ್ಯಮಂತ್ರಿ